# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಮಂ.ವಿ./ಪ.ವಿ./ಸಿಆರ್.62/2021-22/ಇ.26

ಕುಲಸಚಿವರ (ಪರೀಕ್ಷಾಂಗ) ಕಛೇರಿ,
ಮಂಗಳಗಂಗೋತ್ರಿ - 574 199.
ದಿನಾಂಕ: 22.09.2021

**ಪ್ರಕಟಣೆ**

**2021ರ ಅಕ್ಟೋಬರ್** ತಿಂಗಳಲ್ಲಿ ನಡೆಯಲಿರುವ ಕ್ರೆಡಿಟ್ ಆಧಾರಿತ ನಾಲ್ಕನೇ ಸೆಮಿಸ್ಟರ್ ಆವರ್ತಿತ ಬಿ.ಪಿ.ಎಡ್. ಪದವಿಯ ಲಿಖಿತ ಪರೀಕ್ಷೆಗಳು ದಿನಾಂಕ **13.10.2021**ರಿಂದ ಪ್ರಾರಂಭವಾಗಲಿರುವುದು ಎಂಬುದನ್ನು ಬಿ.ಪಿ.ಎಡ್. ಶಿಕ್ಷಣ ನೀಡುವ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಮತ್ತು ಸದರಿ ಪರೀಕ್ಷೆಗಳಿಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ. **ಮುಂದುವರಿದು ಇದೇ ಪಠ್ಯಕ್ರಮ ಅನ್ವಯವಾಗುವ ಚತುರ್ಥ ಸೆಮಿಸ್ಟರ್ ಹಿಂಬಾಕಿ ಇರುವ ಪುನರಾವರ್ತಿತ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ. ಪ್ರಸ್ತುತ ಪಠ್ಯಕ್ರಮ ಹೊರತುಪಡಿಸಿ ಉಳಿದ ಯಾವುದೇ ಪುನರಾವರ್ತಿತ ವಿದ್ಯಾರ್ಥಿಗಳಿದ್ದಲ್ಲಿ, ವಿಶೇಷ ಪರೀಕ್ಷೆ ನಡೆಸುವ ಸಂದರ್ಭದಲ್ಲಿ ಪರೀಕ್ಷೆಗೆ ಹಾಜರಾಗಲು ಅವಕಾಶ ಕಲ್ಪಿಸಲಾಗುವುದು.**

ಸೂಚನೆಗಳು:

1. ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ಎಲ್ಲಾ ವಿಷಯಗಳಿಗೆ/ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು. ಎಲ್ಲಾ ಆವರ್ತಿತ ಮತ್ತು ಪುನರಾವರ್ತಿತ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸುವುದು.

2. ಸವಿವರವಾದ ವೇಳಾಪಟ್ಟಿಯನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು.

3. ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕ ರೂ. 120.00 (ರೂಪಾಯಿ ನೂರ ಇಪ್ಪತ್ತು)ನ್ನು ಕಾಲೇಜು ಮುಖ್ಯಸ್ಥರಲ್ಲಿ ಪಾವತಿಸಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು.

4. *ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹಾಗೂ ಸದ್ರಿ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಶುಲ್ಕ ಪಾವತಿಸಿದ ರಶೀದಿ/ಚಲನ್‌ನನ್ನು ಪ್ರತ್ಯೇಕವಾಗಿ ಎಲ್ಲಾ ವಿವರಗಳನ್ನೊಳಗೊಂಡ ಮಾಹಿತಿಯೊಂದಿಗೆ ಸಲ್ಲಿಸತಕ್ಕದ್ದು.*

5. *ಕುಲಸಚಿವರಿಂದ ಪ್ರವೇಶಾತಿ ಮತ್ತು ವರ್ಗಾವಣೆ ಪ್ರವೇಶಾತಿ ಅನುಮೋದಿಸಲ್ಪಡದ ವಿದ್ಯಾರ್ಥಿಗಳು ಮತ್ತು ಕಡಿಮೆ ಹಾಜರಾತಿ ಪಡೆದ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.* ಪ್ರವೇಶಾವಕಾಶವು ಅಮಾನ್ಯವಾಗಿರುವ ಅಥವಾ ವಿಶ್ವವಿದ್ಯಾನಿಲಯದಿಂದ ಪ್ರವೇಶವು ಅನುಮೋದಿತವಾಗಿಲ್ಲದ ಅಥವಾ ನಿರ್ದಿಷ್ಟ ಪಡಿಸಲಾದ ವಿದ್ಯಾರ್ಥಿಗಳ ಸಂಖ್ಯೆಗಿಂತ ಹೆಚ್ಚಿಗೆಯಾಗಿ ಕಾಲೇಜಿಗೆ ಅಥವಾ ವ್ಯಾಸಂಗ ಕ್ರಮಕ್ಕೆ ಪ್ರವೇಶ ಪಡೆದಿರುವ ಯಾವೊಬ್ಬ ವಿದ್ಯಾರ್ಥಿಯೂ, ಕಾಲೇಜು ಅಥವಾ ವಿಶ್ವವಿದ್ಯಾನಿಲಯವು ನಡೆಸುವ ಪರೀಕ್ಷೆಗೆ ಹಾಜರಾಗಲು ಅರ್ಹರಾಗಿರುವುದಿಲ್ಲ. ಅಲ್ಲದೆ ಆಯಾ ಕೋರ್ಸಿನ ನಿಯಮದ ಪ್ರಕಾರ ಪರೀಕ್ಷೆ ತೆಗೆದುಕೊಳ್ಳಲು ಅರ್ಹರಲ್ಲದ ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸುವಂತಿಲ್ಲ.

6. ವಿದ್ಯಾರ್ಥಿಗಳಿಗೆ ಇಚ್ಛೆ ಬಂದಂತೆ ಪರೀಕ್ಷಾ ಕೇಂದ್ರವನ್ನು ಆರಿಸಲು ಅವಕಾಶವಿರುವುದಿಲ್ಲ.

7. *ವಿಶ್ವವಿದ್ಯಾನಿಲಯದ ವಿನಿಯಮಾವಳಿ (ರೆಗ್ಯುಲೇಶನ್) ಪ್ರಕಾರ ಪರೀಕ್ಷೆಗೆ ಹಾಜರಾಗಲು ಅರ್ಹತೆಯನ್ನು ಹೊಂದಿದ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ.*

8. ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವುದರಿಂದ (ಕಾಲೇಜು ಮತ್ತು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿ) ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ (ಇತರ ವಿದ್ಯಾರ್ಥಿಗಳೊಂದಿಗೆ) ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದು.

9. *ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಪರೀಕ್ಷಾ ಹಣಕಾಸು ತಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ಯಾವುದೇ ಕಾಗುಣಿತ ವ್ಯತ್ಯಾಸವಿಲ್ಲದಂತೆ ದಾಖಲಿಸಬೇಕು.*

10. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು (ದಂಡಶುಲ್ಕ ರಹಿತ ಮತ್ತು ವಿವಿಧ ದರಗಳಲ್ಲಿ ದಂಡಶುಲ್ಕ ಸಹಿತ) ಕಾಲೇಜಿನ ಮುಖ್ಯಸ್ಥರಲ್ಲಿ ಪಾವತಿ ಮಾಡಲು ಈ ಕೆಳಕಂಡ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

   ಪರೀಕ್ಷಾ ಶುಲ್ಕವನ್ನು ಕಟ್ಟಲು ನಿಗದಿಪಡಿಸಲಾದ ಅಂತಿಮ ದಿನಾಂಕ: . . . 30.09.2021

11. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ.